# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | 1122 |
| ಉತ್ತರಿಸುವ ದಿನಾಂಕ | 15.12.2023 |
| ಸದಸ್ಯರ ಹೆಸರು | ಶ್ರೀ. ರವಿಕುಮಾರ್ ಎನ್<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಆರು ತಿಂಗಳುಗಳಿಂದ ಕೃಷಿ ಇಲಾಖೆಯಿಂದ ರಾಜ್ಯದ ಎಷ್ಟು ರೈತರ ಮಕ್ಕಳಿಗೆ "ಮುಖ್ಯಮಂತ್ರಿ ರೈತ ವಿದ್ಯಾನಿಧಿ" ಯೋಜನೆ ಮೂಲಕ ಶಿಷ್ಯವೇತನ ನೀಡಲಾಗಿದೆ;<br>ಕೋರ್ಸ್‌ವಾರು ಮಾಹಿತಿ ನೀಡುವುದು; ಡಿ ಬಿ ಟಿ ಮೂಲಕ ವಿತರಿಸಿದ ಫಲಾನುಭವಿಗಳ ವಿವರವನ್ನು ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು; | ಪ್ರಸಕ್ತ ಸಾಲಿನಲ್ಲಿ ಸರ್ಕಾರದ ಆದೇಶ ಸಂಖ್ಯೆ: AGRI/108/AML/2023, ದಿನಾಂಕ:01.06.2023 ರಲ್ಲಿ ಇತರೆ ಇಲಾಖೆಯ ಕಾರ್ಯಕ್ರಮಗಳಡಿ ಶಿಷ್ಯವೇತನ ಪಡೆಯುವ ವಿದ್ಯಾರ್ಥಿಗಳು ರೈತವಿದ್ಯಾನಿಧಿ ಕಾರ್ಯಕ್ರಮದಡಿ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುವುದಿಲ್ಲ ಎಂದು ಆದೇಶಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ 2023-24 ನೇ ಸಾಲಿನಲ್ಲಿ ಕಾರ್ಯಕ್ರಮ ಅನುಷ್ಠಾನಗೊಳಿಸಲು ಅನುಷ್ಠಾನ ಮಾರ್ಗಸೂಚಿಯಲ್ಲಿ ಬದಲಾವಣೆಗಳಾಗಿರುವುದರಿಂದ "ಮುಖ್ಯಮಂತ್ರಿ ರೈತವಿದ್ಯಾನಿಧಿ" ಕಾರ್ಯಕ್ರಮದಡಿ ಅರ್ಹ ಫಲಾನುಭವಿಗಳನ್ನು ಗುರುತಿಸುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |
| ಆ) | ಪ್ರಸಕ್ತ ಸಾಲಿನಲ್ಲಿ "ಮುಖ್ಯಮಂತ್ರಿ ರೈತ ವಿದ್ಯಾನಿಧಿ" ಯೋಜನೆಗೆ ಎಷ್ಟು ಅನುದಾನವನ್ನು ಮೀಸಲಿಡಿಲಾಗಿದೆ;<br>(ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು) | ಪ್ರಸಕ್ತ ಸಾಲಿನಲ್ಲಿ "ಮುಖ್ಯಮಂತ್ರಿ ರೈತವಿದ್ಯಾನಿಧಿ" ಯೋಜನೆಯಡಿ ರೂ.270.00 ಕೋಟಿಗಳ ಅನುದಾನವನ್ನು ನಿಗದಿಪಡಿಸಲಾಗಿದೆ. ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ ಸ್ವೀಕರಿಸಲಾಗುವ ಅರ್ಜಿಗಳಲ್ಲಿ ಯೋಜನೆಯನುಸಾರ ಕಾಲಕಾಲಕ್ಕೆ ಇಲಾಖೆಯ ಲಾಗಿನ್‌ನಲ್ಲಿ ಲಭ್ಯವಾಗುವ ಅರ್ಹ ಫಲಾನುಭವಿಗಳ ದತ್ತಾಂಶವನ್ನು ಪರಿಶೀಲಿಸಿ ವಿದ್ಯಾರ್ಥಿವೇತನ ನೇರ ನಗದು ವರ್ಗಾವಣೆ ಮೂಲಕ ಪಾವತಿಸಲಾಗುವುದು. |

<table>
<tr>
<td>ಇ)</td>
<td>ಮುಖ್ಯಮಂತ್ರಿ ರೈತವಿದ್ಯಾನಿಧಿ" ಯೋಜನೆಯ ಶೈಕ್ಷಣಿಕ ಪ್ರೋತ್ಸಾಹ ಸಹಾಯಧನಕ್ಕಾಗಿ ಪ್ರಸಕ್ತ ಸಾಲಿನಲ್ಲಿ ಎಷ್ಟು ಅರ್ಜಿಗಳು ಇಲಾಖೆಗೆ ಸಲ್ಲಿಕೆಯಾಗಿವೆ; ಯಾವ ಯಾವ ತರಗತಿಗಳಿಗೆ ಎಷ್ಟೆಷ್ಟು ಪ್ರೋತ್ಸಾಹಧನ ನೀಡಲಾಗುವುದು; ಎಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ. ಬಾಕಿಯಿರುವ ಅರ್ಜಿಗಳು ಎಷ್ಟು; ಯಾವ ಕಾಲಮಿತಿಯೊಳಗೆ ಅರ್ಜಿಗಳನ್ನು ವಿಲೇವಾರಿ ಮಾಡಲಾಗುವುದು; ಜಿಲ್ಲಾವಾರು ತಾಲ್ಲೂಕುವಾರು ಮಾಹಿತಿ ನೀಡುವುದು?</td>
<td>
<ul>
<li>ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ "ಮುಖ್ಯಮಂತ್ರಿ ರೈತವಿದ್ಯಾನಿಧಿ" ಯೋಜನೆಯಡಿ ಇಲಾಖೆಗೆ ವಿದ್ಯಾರ್ಥಿಗಳ ಅರ್ಜಿಗಳು ನೇರವಾಗಿ ಕೃಷಿ ಇಲಾಖೆಗೆ ಸಲ್ಲಿಕೆಯಾಗುವುದಿಲ್ಲ. ಬದಲಾಗಿ ರಾಜ್ಯದಲ್ಲಿ ಇತರೆ ಇಲಾಖೆಗಳು ವಿತರಿಸುವ ಎಲ್ಲಾ ಶಿಷ್ಯವೇತನಕ್ಕೆ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿನ ವಿದ್ಯಾರ್ಥಿಗಳು ಒಂದೇ ಅರ್ಜಿಯನ್ನು ಸಲ್ಲಿಸಲಾಗುವುದು. ನಂತರ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿನ ಪರಿಶೀಲನೆಯ ನಂತರ ಆಯಾ ಇಲಾಖೆಗಳ ಅನುಷ್ಠಾನ ಮಾರ್ಗಸೂಚಿಯನ್ವಯ ಅರ್ಹ ವಿದ್ಯಾರ್ಥಿಗಳ ದತ್ತಾಂಶವನ್ನು ಸಂಬಂಧಪಟ್ಟ ಇಲಾಖೆಗಳ ಲಾಗಿನ್‌ನಲ್ಲಿ ಡಿಬಿಟಿ ಮೂಲಕ ವಿದ್ಯಾರ್ಥಿವೇತನ ಪಾವತಿಸಲು ಲಭ್ಯವಾಗಿಸುವರು.</li>
<li>ಕಾರ್ಯಕ್ರಮದಡಿ ವಿವಿದ ಕೋರ್ಸ್‌ಗಳಿಗೆ ನೀಡಲಾಗುವ ವಿದ್ಯಾರ್ಥಿ ವೇತನದ ವಿವರ:</li>
</ul>
<table>
<tr><th>ಕ್ರ ಸಂ</th><th>ಕೋರ್ಸ್ ಗಳು</th><th>ವಿದ್ಯಾರ್ಥಿಗಳು</th><th>ವಿದ್ಯಾರ್ಥಿನಿಯರು</th></tr>
<tr><td>1</td><td>ಪ್ರೌಢಶಾಲಾಶಿಕ್ಷಣ</td><td>———</td><td>ರೂ. 2000/-</td></tr>
<tr><td>2</td><td>ಪಿ.ಯು.ಸಿ / ಐ.ಟಿ.ಐ / ಡಿಪ್ಲೋಮಾ</td><td>ರೂ. 2500/-</td><td>ರೂ. 3000/-</td></tr>
<tr><td>3</td><td>ಬಿ.ಎ./ಬಿ.ಎಸ್.ಸಿ/ಬಿ.ಕಾಂ ಇನ್ನಿತರೆ ಪದವಿ ಕೋರ್ಸ್‌ಗಳು</td><td>ರೂ. 5000/-</td><td>ರೂ. 5500/-</td></tr>
<tr><td>4</td><td>ಎಲ್.ಎಲ್.ಬಿ / ಪ್ಯಾರಾಮೆಡಿಕಲ್ / ಬಿ.ಫಾರ್ಮ್ / ನರ್ಸಿಂಗ್ ಇನ್ನಿತರೆ ವೃತ್ತಿಪರ ಕೋರ್ಸ್‌ಗಳು</td><td>ರೂ. 7500/-</td><td>ರೂ. 8000/-</td></tr>
<tr><td>5</td><td>ಎಂ.ಬಿ.ಬಿ.ಎಸ್ / ಬಿ.ಇ / ಬಿ.ಟೆಕ್ ಮತ್ತು ಎಲ್ಲಾ ಸ್ನಾತಕೋತ್ತರ ಕೋರ್ಸ್‌ಗಳು</td><td>ರೂ. 10000/-</td><td>ರೂ. 11000/-</td></tr>
</table>
</td>
</tr>
</table>

| | | |
|---|---|---|
| | | ಪ್ರಸಕ್ತ ಸಾಲಿನಲ್ಲಿ "ಮುಖ್ಯಮಂತ್ರಿ ರೈತವಿದ್ಯಾನಿಧಿ" ಕಾರ್ಯಕ್ರಮದಡಿ ಅನುಷ್ಠಾನ ಮಾರ್ಗಸೂಚಿಯಲ್ಲಿ ಬದಲಾವಣೆಗಳಾಗಿರುವುದರಿಂದ ಅರ್ಹ ಫಲಾನುಭವಿಗಳನ್ನು ಗುರುತಿಸುವ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದವರಿಂದ ಸ್ವೀಕರಿಸಲಾಗುವ ಅರ್ಹ ವಿದ್ಯಾರ್ಥಿಗಳ ದತ್ತಾಂಶವನ್ನು ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಲಾಗುವುದು. |

**ಸಂಖ್ಯೆ: AGRI/248/AML/2023**

12/12

**(ಎನ್. ಚಲುವರಾಯಸ್ವಾಮಿ)**
ಕೃಷಿ ಸಚಿವರು